ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

ಅ) ಇಲ್ಲ

ಆ) ಇಲ್ಲ

**ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಶಿಕ್ಷಣ ಸಂಘಗಳಲ್ಲಿ ಸ್ಥಾನಗಳನ್ನು ಕಾದಿರಿಸುವುದು**

1565 (1761) ಶ್ರೀ ರೋಜರ್ ಬಿನ್ನಿ (ನಾಮನಿರ್ದೇಶನ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಸಿ.ಇ.ಟಿ ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಸ್ಥಾನಗಳನ್ನು ಕಾದಿರಿಸಲು ಸರ್ಕಾರ ಅವಕಾಶ ಕಲ್ಪಿಸಿದೆಯೆ?

ಆ) ಹಾಗಿದ್ದಲ್ಲಿ ಎಂದಿನಿಂದ ಈ ಅವಕಾಶ ಕಲ್ಪಿಸಲಾಗಿದೆ ಮತ್ತು ಅವುಗಳು ಯಾವುವು?

ಇ) ಇಲ್ಲದಿದ್ದಲ್ಲಿ ವಿವಿಧ ಶೈಕ್ಷಣಿಕ ಸಂಸ್ಥೆಗಳಲ್ಲಿ ಸ್ಥಾನಗಳನ್ನು ಕಾದಿರಿಸಲು ಸರ್ಕಾರದ ಸೂಕ್ತ ಅವಕಾಶ ಕಲ್ಪಿಸುವುದೆ.

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಇಂಜಿನಿಯರಿಂಗ್ ಪ್ರವೇಶಕ್ಕೆ ಸಿ.ಇ.ಟಿ ಮತಿಯಿಂದ 02 ಸ್ಥಾನಗಳು ಮತ್ತು ಡಿಪ್ಲೋಮೊ ಪ್ರವೇಶಕ್ಕೆ ಪ್ರಾನ್ಸಿಪಾಲರು, ಎಸ್.ಜಿ. (ಸರ್ಕಾರ) ಪಾಲಿಟೆಕ್ನಿಕ್, ಬೆಂಗಳೂರು ಇವರಿಂದ 02 ಸ್ಥಾನಗಳ ಹಂಚಿಕೆ ಮಾಡಲಾಗುತ್ತಿದೆ. ಈ ಸೌಲಭ್ಯ 1993ರಿಂದ ಇಂಜಿನಿಯರಿಂಗ್‌ನಲ್ಲೂ 1982 ರಿಂದ ಪಾಲಿಟೆಕ್ನಿಕ್‌ನಲ್ಲೂ ಲಭ್ಯವಿರುತ್ತದೆ.

ಇ) ಉದ್ಭವಿಸುವುದಿಲ್ಲ

**ಚಾಮರಾಜನಗರ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು**

1566 (1762) ಶ್ರೀ ಜಿ. ರಾಜುಗೌಡ (ಹನ್ನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಚಾಮರಾಜನಗರದ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟೆಷ್ಟು ಪಾಥಮಿಕ ಆರೋಗ್ಯ ಕೇಂದ್ರಗಳಿವೆ.

ಆ) ಆರೋಗ್ಯ ಕೇಂದ್ರಗಳಲ್ಲಿ ಪ್ರತಿಯೊಂದು ಮಂಜೂರಾದ ಹುದ್ದೆಗಳು ಎಲ್ಲೆಲ್ಲಿ ಎಷ್ಟೆಷ್ಟು ಹುದ್ದೆಗಳು ಖಾಲಿ ಇವೆ.

ಇ) ವಾರ್ಷಿಕ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಔಷದಿ ಸರಬರಾಜಿಗೆ ಎಷ್ಟೆಷ್ಟು ಹಣವನ್ನು ನಿಗದಿಪಡಿಸಲಾಗಿದೆ?